# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 369 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಯು.ಬಿ.ವೆಂಕಟೇಶ್ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 07.12.2023 |
| ಉತ್ತರಿಸುವ ಸಚಿವರು | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಹಾಗೂ ಪ್ರವಾಸೋದ್ಯಮ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ "ಸ್ವದೇಶಿ ದರ್ಶನ್" 1 ಮತ್ತು 2ರ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆಯೇ; | ರಾಜ್ಯದಲ್ಲಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ "ಸ್ವದೇಶ್ ದರ್ಶನ್" 1.0 ಯೋಜನೆಯಡಿ ಯಾವುದೇ ಯೋಜನೆಗಳು ಮಂಜೂರಾಗಿರುವುದಿಲ್ಲ. "ಸ್ವದೇಶ್ ದರ್ಶನ್" 2.0 ಯೋಜನೆಯಡಿ ಕೆಳಕಂಡ 02 ಯೋಜನೆಗಳು ಮಂಜೂರಾಗಿದ್ದು, ಇವುಗಳನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗುತ್ತಿದೆ.<br><br>1. ಹಂಪಿ ಸ್ಮಾರಕಗಳು ವಿಜಯನಗರ ಜಿಲ್ಲೆ.<br>2. ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ, ಮೈಸೂರು. |
| ಆ) | ಹಾಗಿದ್ದಲ್ಲಿ, ಈ ಯೋಜನೆಯ ಉದ್ದೇಶವೇನು: ಆರಂಭದಿಂದ ಈವರೆಗೆ ಎಷ್ಟು ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದೆ; ಎಷ್ಟು ಕಾಮಗಾರಿಗಳನ್ನು ಪ್ರಾರಂಭಿಸಲಾಗಿದೆ; ಪ್ರಗತಿಯಲ್ಲಿರುವ ಕಾಮಗಾರಿಗಳೆಷ್ಟು; ಅನುಮೋದನೆಯಾಗದಿದ್ದಲ್ಲಿ, ಕಾರಣಗಳೇನು; (ಸಂಪೂರ್ಣ ವಿವರವನ್ನು ನೀಡುವುದು) | ಕೇಂದ್ರ ಸರ್ಕಾರದ ಸ್ವದೇಶ್ ದರ್ಶನ್ ಯೋಜನೆಯ ಮುಖ್ಯ ಉದ್ದೇಶಗಳನ್ನು ಈ ಕೆಳಗೆ ವಿವರಿಸಿದೆ.<br>• ಇದೊಂದು ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದ ಕೇಂದ್ರ ಪುರಸ್ಕೃತ ಥೀಮ್ ಧಾರಿತ ಯೋಜನೆಯಾಗಿದೆ.<br>• ಆರ್ಥಿಕ ಬೆಳವಣಿಗೆ ಮತ್ತು ಉದ್ಯೋಗ ಸೃಷ್ಟಿಯ ಪ್ರಮುಖ ಉತ್ತೇಜಕವಾಗಿ ಪ್ರವಾಸೋದ್ಯಮವನ್ನು ಬೆಳೆಸುವುದು.<br>• ಯೋಜಿತ ಮತ್ತು ಆದ್ಯತೆಯ ರೀತಿಯಲ್ಲಿ ಪ್ರವಾಸಿ ಸಾಮರ್ಥ್ಯವನ್ನು ಹೊಂದಿರುವ ಸರ್ಕ್ಯೂಟ್‌ಗಳನ್ನು ಅಭಿವೃದ್ಧಿಪಡಿಸುವುದು.<br>• ದೇಶದಲ್ಲಿ ಜೀವನೋಪಾಯವನ್ನು ಸೃಷ್ಟಿಸಲು ದೇಶದ ಸಾಂಸ್ಕೃತಿಕ ಮತ್ತು ಪರಂಪರೆಯ ಮೌಲ್ಯವನ್ನು ಉತ್ತೇಜಿಸುವುದು ಹಾಗೂ ಪ್ರಸರಣಗೊಳಿಸುವುದು.<br>• ಅಭಿವೃದ್ಧಿಶೀಲ ಪ್ರಪಂಚದಿಂದ ಸುಸ್ಥಿರ ರೀತಿಯಲ್ಲಿ ಪ್ರವಾಸಿ ಆಕರ್ಷಣೆಯನ್ನು ಹೆಚ್ಚಿಸುವುದು ಸರ್ಕ್ಯೂಟ್/ ಗಮ್ಯಸ್ಥಾನಗಳಲ್ಲಿ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸುವುದು.<br>• ಸಮುದಾಯ ಆಧಾರಿತ ಅಭಿವೃದ್ಧಿ ಮತ್ತು ಬಡವರ ಪರವಾದ ಪ್ರವಾಸೋದ್ಯಮ ವಿಧಾನವನ್ನು ಅನುಸರಿಸುವುದು.<br>• ಸ್ಥಳೀಯರಲ್ಲಿ ಜಾಗೃತಿ ಮೂಡಿಸುವುದು.<br><br>ಸದರಿ ಯೋಜನೆಯಡಿ ಈವರೆಗೆ ಕೆಳಕಂಡ 02 ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದೆ.<br><br>1. ಹಂಪಿ ಸ್ಮಾರಕಗಳು ವಿಜಯನಗರ ಜಿಲ್ಲೆ.<br>2. ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ, ಮೈಸೂರು. |

..2..

| | | |
|---|---|---|
| | | ಹಂಪಿಯಲ್ಲಿ ರೂ.75.00 ಕೋಟಿಗಳ ವೆಚ್ಚದಲ್ಲಿ "Setting up of "Travellers nooks" ಹಾಗೂ ಮೈಸೂರಿನಲ್ಲಿ ರೂ.75.00 ಕೋಟಿಗಳ ವೆಚ್ಚದಲ್ಲಿ Ecological experience zone ಮತ್ತು Tonga ride heritage experience zone ನಿರ್ಮಾಣ ಮಾಡುವ ಬಗ್ಗೆ ಸಮಾಲೋಚನಾ ಸಂಸ್ಥೆಯು ಕರಡು ವಿವರವಾದ ಯೋಜನಾ ವರದಿ (DPR) ಯನ್ನು ಇಲಾಖೆಗೆ ಸಲ್ಲಿಸಿದ್ದು, ಯೋಜನಾ ವರದಿಯನ್ನು ತಾಂತ್ರಿಕ ವಿಭಾಗದಿಂದ ಪರಿಶೀಲಿಸಲಾಗುತ್ತಿದೆ. ತಾಂತ್ರಿಕ ವಿಭಾಗದಿಂದ ಪರಿಶೀಲಿಸಿದ ನಂತರ ಅಂತಿಮ ಯೋಜನಾ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿ, ಅನುದಾನ ಬಿಡುಗಡೆಯಾದ ನಂತರ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುವುದು. |
| (ಇ) | ಕೇಂದ್ರ ಸರ್ಕಾರ ಕಳೆದ 08 ವರ್ಷಗಳಿಂದ ಈ ಯೋಜನೆಯಡಿ ರಾಜ್ಯಕ್ಕೆ ಬಿಡುಗಡೆಗೊಳಿಸಿರುವ ಅನುದಾನ ಹಾಗೂ ಖರ್ಚಾಗಿರುವ ಅನುದಾನ ಎಷ್ಟು? (ಸಂಪೂರ್ಣ ಮಾಹಿತಿಯನ್ನು ನೀಡುವುದು) | ಕಳೆದ 08 ವರ್ಷಗಳಿಂದ ಈ ಯೋಜನೆಗಳಡಿಯಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. |

ಸಂಖ್ಯೆ: ಟಿಒಆರ್ 204 ಟಿಡಿವಿ 2023

(ಎಚ್.ಕೆ.ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು.